ಓ ಎಸ್ ನಂ.203/2017

ಪಿ ಡಬ್ಲ್ಯೂಃ 1

ದಿ. 28-3-2019 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಟಿ ಆರ್ ವಕೀಲರಿಂದಃ

ನಾನು ನನ್ನ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿರುವ ಅಂಶವನ್ನು ನಾನೇ ಹೇಳಿ ಬರೆಸಿ ಸಹಿ ಹಾಕಿರುತ್ತೇನೆ. ಅದರಲ್ಲಿನ ಅಂಶಗಳು ಸತ್ಯವಾಗಿರುತ್ತವೆ. ನ್ಯಾಯಾಲಯದ ಮುಂದೆ ಸಲ್ಲಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ.

ಭೂಮಿ ಮಂಜೂರು ಮಾಡಲು ಸಲ್ಲಿಸಿದ್ದ ಅರ್ಜಿಯ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ದಾವಾಸ್ವತ್ತಿನ ನಕ್ಷೆ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಉಪವಿಭಾಗಾಧಿಕಾರಿ ದಾವಣಗೆರೆ ರವರು ಮಾಡಿರುವ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಮಂಜೂರಾತಿ ಪತ್ರದ ದೃಢೀಕೃತ ನಕಲು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ದಾವಾಸ್ವತ್ತಿಗೆ ಸಂಬಂಧಿಸಿದ 6 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-5 ರಿಂದ ನಿಪಿ-10 ಎಂದು ಗುರುತಿಸಲಾಯಿತು. ಆಕಾರ್ ಬಂದ್ ಉತಾರ್ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-11 ಎಂದು ಗುರುತಿಸಲಾಯಿತು.ಟಿಪ್ಪಣಿ ಪುಸ್ತಕದ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿ-12 ಮತ್ತು ನಿಪಿ-13 ಎಂದು ಗುರುತಿಸಲಾಯಿತು. ಋಣಭಾರ ರಾಹಿತ್ಯ ಪತ್ರಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿ-14 ರಿಂದ ನಿಪಿ-16 ಎಂದು ಗುರುತಿಸಲಾಯಿತು. ಉಪ ತಹಸಿಲ್ದಾರರು ಮತ್ತೋಡು ರವರು ನೀಡಿರುವ ಹಿಂಬರಹ ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-17 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶಕೋರಿದ್ದರಿಂದ ಮುಂದೂಡಲಾಯಿತು.

(ತೆ.ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇದೆ

ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ್ ಸಿ

ಹೊಸದುರ್ಗ .